ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

## ಪತ್ರಿಕಾ ತುಣುಕುಗಳು
## PAPER CLIPPINGS

5

ಇಲಾಖೆ / ವಿಷಯ : DEPARTMENT / SUBJECT: ಚುನಾವಣೆ

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯ ಕರ್ನಾಟಕ ದಿನಾಂಕ : DATE : 10/10/20

# 8 ನಾಮಪತ್ರ ತಿರಸ್ಕೃತ

10/10/20

■ **ವಿಕ ಸುದ್ದಿಲೋಕ** ಧಾರವಾಡ

ಧಾರವಾಡ, ಗದಗ, ಹಾವೇರಿ ಹಾಗೂ ಉತ್ತರ ಕನ್ನಡ ಜಿಲ್ಲೆಗಳ ವ್ಯಾಪ್ತಿಯ ಕರ್ನಾಟಕ ವಿಧಾನ ಪರಿಷತ್ ಪಶ್ಚಿಮ ಪದವೀಧರ ಕ್ಷೇತ್ರದ ಅಭ್ಯರ್ಥಿಗಳ ನಾಮಪತ್ರ ಪರಿಶೀಲನೆ ಕಾರ್ಯ ಶುಕ್ರವಾರ ಜರುಗಿತು. 19 ಅಭ್ಯರ್ಥಿಗಳಿಂದ ಸಲ್ಲಿಸಲ್ಪಟ್ಟಿದ್ದ 32 ನಾಮಪತ್ರಗಳಲ್ಲಿ 8 ಅಭ್ಯರ್ಥಿಗಳ ನಾಮಪತ್ರಗಳು ತಿರಸ್ಕೃತಗೊಂಡಿವೆ. 11 ಅಭ್ಯರ್ಥಿಗಳ ನಾಮಪತ್ರಗಳು ಕ್ರಮಬದ್ಧವಾಗಿವೆ.

ಧಾರವಾಡ ಜಿಲ್ಲಾಧಿಕಾರಿಯವರ ಕಚೇರಿಯಲ್ಲಿ ಶುಕ್ರವಾರ ಚುನಾವಣಾ ವೀಕ್ಷಕರಾಗಿರುವ ಡಾ. ಶಾಲಿನಿ ರಜನೀಶ್, ಚುನಾವಣಾಧಿಕಾರಿ ಪ್ರಾದೇಶಿಕ ಆಯುಕ್ತ ಅಮ್ಲಾನ್ ಆದಿತ್ಯ ಬಿಸ್ವಾಸ್, ಜಿಲ್ಲಾಧಿಕಾರಿ ನಿತೇಶ ಪಾಟೀಲ ಅವರು ನಾಮಪತ್ರ ಪರಿಶೀಲಿಸಿದರು.